ಆ) ನಾರಾಯಣಪುರ ಬಲದಂಡೆ ಕಾಲುವೆಯ ಕಿ.ಮೀ. 95.00 ರಿಂದ ಮುಂದುವರೆದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸರ್ವೆ ತನಿಖಾ ಕಾರ್ಯ ಪ್ರಗತಿಯಲ್ಲಿದ್ದು, ಕಾಲುವೆ ಕಾಮಗರಿಯನ್ನು ಪ್ರಾರಂಭಿಸಿದ ನಂತರ ಗಣೇಕಲ್ ಜಲಾಶಯಕ್ಕೆ ಲಿಂಕ್ ಕೆನಾಲ್ ನಿರ್ಮಿಸುವ ಕುರಿತು ಪರಿಶೀಲಿಸಲಾಗುವುದು.

**1572 (1972) ಶ್ರೀ ಬೋಸರಾಜು ಎನ್.ಎಸ್. (ಮಾನ್ವಿ)** :– ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗಭಧ್ರಾ ನದಿ ಮೇಲಿರುವ ಚೀಕಲಪರ್ವಿ ಗ್ರಾಮದ ಹತ್ತಿರ ನಿರ್ಮಿಸಲು ಉದ್ದೇಶಿಸಿರುವ ಬ್ಯಾಲೆನ್ಸಿಂಗ್ ರಿಸರ್ವ್‌ವಾಯರ್ (ಬ್ಯಾರೇಜ್) ಮಂಜೂರಾತಿಯಾಗಿದೆಯೇ;

ಆ) ಮಂಜೂರಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡು ಕ್ರಮವೇನು?

**ಶ್ರೀ ಕೆ.ಎಸ್. ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)**:

ಅ) ಮಂಜೂರಾತಿ ಆಗಿರುವುದಿಲ್ಲ.

ಆ) ಮೇಲ್ಕಂಡ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

**1575 (1718) ಶ್ರೀ ಆರ್. ಧ್ರುವನಾರಾಯಣ (ಸಂತೇಮರಳ್ಳಿ)**:– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಂತೇಮರಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಕುದೇರು ಗ್ರಾಮದಲ್ಲಿ ಪ್ರಥಮ ದರ್ಜೆ ಕಾಲೇಜು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ;

ಆ) ಡಾ॥ ನಂಜುಂಡಪ್ಪನವರ ವರದಿಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಗಮನದಲ್ಲಿದೆಯೇ;

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

**ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)**:

ಅ) ಸರ್ಕಾರದ ಪರಿಶೀಲನೆಯಲ್ಲಿದೆ

ಆ) ಹೌದು

ಇ) ಈ ಕುರಿತಂತೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

**1576 (1719) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ):–** ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆಯಲ್ಲಿ ತಾಂತ್ರಿಕ ಕಾಲೇಜುಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ;

ಆ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

**ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):**

ಅ) ಚಾಮರಾಜನಗರ ಜಿಲ್ಲೆಯಲ್ಲಿ ಹೊಸ ಇಂಜಿನಿಯರಿಂಗ್ ಕಾಲೇಜನ್ನು ಸ್ಥಾಪಿಸಲು ಉದ್ದೇಶಿಸಿರುವುದಿಲ್ಲ. ಆದರೆ ಚಾಮರಾಜನಗರದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್‌ನ್ನು ಇಂಜಿನಿಯರಿಂಗ್ ಕಾಲೇಜನ್ನಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿದೆ.

ಆ) ಅಗತ್ಯ ಮೂಲಭೂತ ಸೌಕರ್ಯಗಳಾದ ನಿವೇಶನ, ಕಟ್ಟಡ ಇತ್ಯಾದಿಗಳ ಲಭ್ಯತೆ ಮೇರೆಗೆ ಎ.ಐ.ಸಿ.ಟಿ.ಇ.ಯ ಅನುಮೋದನೆ ಪಡೆದ ನಂತರ ಈ ಬಗ್ಗೆ ಕ್ರಮ ವಹಿಸಲಾಗುವುದು.

**1577 (1720) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ):–** ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆಯ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಜ್ಞಾನ ವಿಭಾಗ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

**ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):**

ಅ) ಚಾಮರಾಜನಗರ ಜಿಲ್ಲೆಯ ಈ ಕೆಳಕಂಡ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗಗಳಿರುತ್ತವೆ.